All India Radio: Bangalore
Regional Bulletin In Kannada
14.01.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಡಿನಾದ್ಯಂತ ಇಂದು ಮಕರ ಸಂಕ್ರಾಂತಿ ಹಬ್ಬದ ಸಂಭ್ರಮ ; ರಾಜ್ಯಪಾಲ, ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಶುಭಾಶಯ
- ರಾಜ್ಯದಿಂದ ೩.೫ ಲಕ್ಷ ಮೆಟ್ರಿಕ್ ಟನ್ ಅಕ್ಕಿ ಖರೀದಿಗೆ ಕೇಂದ್ರ ಸರ್ಕಾರ ಸಮ್ಮತಿ
- ಮೈಸೂರಿನಲ್ಲಿ ಬಹುರೂಪಿ ೨೦೨೫ರ ರಾಷ್ಟ್ರೀಯ ನಾಟಕೋತ್ಸವ ಇಂದಿನಿಂದ ಆರಂಭ
- ಹಸುಗಳ ಕೆಚ್ಚಲು ಕೊಯ್ದ ಪ್ರಕರಣದ ತನಿಖೆ ಆಗ್ರಹಿಸಿ ಬಿಜೆಪಿಯಿಂದ ರಾಜ್ಯಾದ್ಯಂತ ಪ್ರತಿಭಟನೆ - ಪ್ರತಿಪಕ್ಷ ನಾಯಕ ಆರ್. ಅಶೋಕ

<><><><>

ನಾಡಿನಾದ್ಯಂತ ಪುಷ್ಯ ಮಾಸದ ಕೃಷ್ಣ ಪಕ್ಷದ ಪ್ರತಿಪದ ದಿನವಾದ ಇಂದು ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಇಂದು ಜನರು ತಮ್ಮ ಬಂಧು-ಮಿತ್ರರೊಂದಿಗೆ ಎಳ್ಳು, ಬೆಲ್ಲ, ಹಂಚಿ, ಎಲ್ಲರ ಬಾಳಿನಲ್ಲಿ ಸುಖ ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸುತ್ತಾ ಸಂಭ್ರಮಿಸುತ್ತಾರೆ. ಇನ್ನು ಈ ದಿನ ಗ್ರಾಮೀಣ ಭಾಗದಲ್ಲಿ ರೈತರು, ತಮ್ಮ ರಾಸುಗಳನ್ನು ಅಲಂಕರಿಸಿ ಪೂಜೆ ಸಲ್ಲಿಸುತ್ತಾರೆ.  ತಮ್ಮ ಕೃಷಿ ಚಟುವಟಿಕೆಯ ಪ್ರಮುಖ ಭಾಗವಾದ ದನಕರುಗಳ ಕೊಂಬುಗಳನ್ನು ವಿವಿಧ ಬಣ್ಣಗಳಿಂದ ಸಿಂಗರಿಸಿ ಪೂಜೆ ಮಾಡಿ, ನಂತರ ಹಬ್ಬದ ಸಾಂಪ್ರದಾಯಿಕ ತಿಂಡಿ ತಿನಿಸುಗಳಾದ ಬೇಯಿಸಿದ ಕಡಲೆಕಾಯಿ, ಅವರೇಕಾಯಿ, ಗೆಣಸು, ಕಬ್ಬನ್ನು ತಮ್ಮ ಪ್ರೀತಿಪಾತ್ರ ದನಕರುಗಳಿಗೆ ತಿನ್ನಿಸುತ್ತಿದ್ದ ದೃಶ್ಯಗಳು ಸಾಮಾನ್ಯವಾಗಿ ಕಂಡು ಬರುತ್ತಿವೆ. ಸಂಜೆ ದನಗಳನ್ನು ಕಿಚ್ಚು ಹಾಯಿಸುವ ಕಾರ್ಯಕ್ರಮಗಳು ಜರುಗಲಿವೆ. ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ರಾಜ್ಯದ ಜನತೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸೇರಿದಂತೆ ಗಣ್ಯರು ಶುಭಾಶಯ ಕೋರಿದ್ದಾರೆ. ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ರಾಜಭವನದಲ್ಲಿಂದು ಗೋವುಗಳಿಗೆ ಪೂಜೆ ಸಲ್ಲಿಸಿದರು. ನಂತರ ಮಾತನಾಡಿದ ಅವರು,

ಕರ್ನಾಟಕದ ಸಮಸ್ತ ಜನತೆಗೆ ದೇವರು ಆರೋಗ್ಯ, ಆಯಸ್ಸು ಮತ್ತು ಶಾಂತಿಯನ್ನು ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಕೃತಿಯಲ್ಲಿ ಪರ್ವಕಾಲವಾದ ಸಂಕ್ರಾಂತಿ ಹಬ್ಬ ನಾಡಿನ ಅಭಿವೃದ್ಧಿಯ ವಿಚಾರದಲ್ಲಿ ಸಂಕ್ರಮಣ ಕಾಲಘಟ್ಟವಾಗಿ ಹೊರಹೊಮ್ಮಿದೆ ಎಂದು ತಮ್ಮ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸುಗ್ಗಿ ಹಬ್ಬ ನಾಡಿನ ಸಮಸ್ತ ಜನರಿಗೂ ವಿಶೇಷವಾಗಿ ರೈತ ಬಾಂಧವರ ಬದುಕಿನಲ್ಲಿ ಸುಖ, ಸಂತೋಷ ಮತ್ತು ಸಮೃದ್ಧಿ ನೆಲೆಸುವಂತೆ ಮಾಡಲಿ ಎಂದು ಹಾರೈಸಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ದೇವಲಾಪುರ ಗ್ರಾಮದಲ್ಲಿ ಸಂಕ್ರಾಂತಿ ಸಂಭ್ರಮ ವಿಶೇ? ಕಾರ್ಯಕ್ರಮ ಆಯೋಜಿಸಲಾಗಿದೆ. ಇಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಜಿಲ್ಲಾಧಿಕಾರಿ ಡಾ. ಕುಮಾರ ನೇತೃತ್ವದಲ್ಲಿ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮಕ್ಕೆ ಅಧಿಕೃತ ಚಾಲನೆ ದೊರೆಯಲಿದೆ.

<><><><>

ರಾಜ್ಯದ ವಿವಿಧ ಜಿಲ್ಲೆಗಳಲ್ಲೂ ಇಂದು ಸಂಕ್ರಾಂತಿ ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ : ಸಂಕ್ರಾಂತಿ ಪ್ರಯುಕ್ತ ಮಂಡ್ಯ ನಗರದಲ್ಲಿ ಗೋ ರಕ್ಷಣಾ ಸಮಿತಿ ವತಿಯಿಂದ ೫ನೇ ವರ್ಷದ ಗೋವು ಮತ್ತು ಭತ್ತದ ರಾಶಿ ಪೂಜಾಕಾರ್ಯಕ್ರಮಕ್ಕೆ ಇಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಯದುವೀರ್, ಪ್ರಾಚೀನ ಕಾಲದ ಪರಂಪರೆ ಹಾಗೂ ಸಂಸ್ಕೃತಿ ಉಳಿದಿದ್ದರೆ ಅದು ಭಾರತದಲ್ಲಿ ಮಾತ್ರ ಎಂದು ಹೇಳಿದ್ದಾರೆ. ಪ್ರಧಾನಿ ಮೋದಿ ಅವರ ಧ್ಯೇಯವಾಕ್ಯವಾದ ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಅನ್ನು ದೇಶದ ಪ್ರತಿಯೊಬ್ಬ ಪ್ರಜೆಯೂ ಪಾಲಿಸಬೇಕು. ಭಾರತದ ಭವ್ಯ ಪಾರಂಪರಿಕತೆಯ ಅಡಿಯಲ್ಲಿ ವಿಕಸಿತ ಭಾರತ ನಿರ್ಮಾಣವಾಗಬೇಕೆಂದು ಹೇಳಿದರು.

ಧ್ವನಿ : ಯದುವೀರ್ ಒಡೆಯರ್

ಕೋಲಾರ ಜಿಲ್ಲೆಯಾದ್ಯಂತ ಮಕರ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ನಗರದ ಗಂಗರ ಕಾಲದಲ್ಲಿ ನಿರ್ಮಿತವಾದ ಸೋಮೇಶ್ವರ ದೇವಾಲಯ ಹಾಗೂ ಕೋಟಿ ಲಿಂಗ ದೇವಾಲಯ ಸೇರಿದಂತೆ ಶಿವನ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿವೆ. ಭಕ್ತರು ಶಿವನ ದೇವಾಲಯಗಳಿಗೆ ತೆರಳಿ ದರ್ಶನ ಪಡೆಯುತ್ತಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಸಂಕ್ರಾಂತಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತಿದ್ದು, ಜಿಲ್ಲೆಯ ಕಡೂರು, ಅಜ್ಜಂಪುರ, ತರೀಕೆರೆ ತಾಲೂಕುಗಳ ಹಲವು ಗ್ರಾಮಗಳಲ್ಲಿ ಇಂದು ರೈತರು, ಬೆಳೆದ ದವಸ ಧಾನ್ಯಗಳಿಗೆ ಹಾಗೂ ತಮ್ಮ ಗೋವುಗಳಿಗೆ ವಿಶೇಷ ಪೂಜೆ

ಸಲ್ಲಿಸುತ್ತಿದ್ದಾರೆ. ಇನ್ನು ಮಕರ ಜ್ಯೋತಿ ಅಂಗವಾಗಿ ಚಿಕ್ಕಮಗಳೂರು, ಮೂಡಿಗೆರೆ ಪಟ್ಟಣಗಳಲ್ಲಿರುವ ಅಯ್ಯಪ್ಪಸ್ವಾಮಿ ದೇವಾಲಯಗಳಲ್ಲಿ ಇಂದು ಸಂಜೆ ವಿಶೇಷ ಪೂಜೆ, ಪ್ರಸಾದ ವಿನಿಯೋಗ ಹಮ್ಮಿಕೊಳ್ಳಲಾಗಿದೆ. ದಾವಣಗೆರೆ ಜಿಲ್ಲೆಯಲ್ಲಿಂದು ಮಕರ ಸಂಕ್ರಾಂತಿ ಹಬ್ಬವನ್ನು ಸಡಗರದಿಂದ ಆಚರಿಸಲಾಯಿತು. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ರೈತಾಪಿ ವರ್ಗ ಜಾನುವಾರುಗಳಿಗೆ ಪೂಜೆ ಸಲ್ಲಿಸಿದರು. ನಂತರ ಎಳ್ಳು ಬೆಲ್ಲ ಬೀರುವ ಮೂಲಕ ಹಬ್ಬವನ್ನು ಸಂಭ್ರಮಿಸಿದರು. ಸುಗ್ಗಿ ಹಬ್ಬ ಮಕರ ಸಂಕ್ರಾಂತಿ ಹಬ್ಬವನ್ನು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಅತ್ಯಂತ ಸಡಗರ ಸಂಭ್ರಮಗಳಿಂದ ಆಚರಿಸಲಾಗುತ್ತಿದೆ. ಸಂಕ್ರಾಂತಿ ಹಬ್ಬವನ್ನು ಮುಖ್ಯವಾಗಿ ಗ್ರಾಮೀಣ ಪ್ರದೇಶಗಳಲ್ಲಿ ರೈತರು ಸಂಭ್ರಮದಿಂದ ಆಚರಿಸುತ್ತಿರುವುದು ಕಂಡು ಬಂದಿದೆ.

<><><><>

ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಮನವಿಗೆ ಸ್ಪಂದಿಸಿರುವ ಕೇಂದ್ರ ಸರ್ಕಾರ ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆಗೆ ರಾಜ್ಯದಿಂದ ೩.೫ ಲಕ್ಷ ಮೆಟ್ರಿಕ್ ಟನ್ ಹೆಚ್ಚುವರಿ ಅಕ್ಕಿ ಖರೀದಿಗೆ ಸಮ್ಮತಿಸಿದ್ದು ಸೂಕ್ತ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದೆ. ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆಯಲ್ಲಿ ನೀಡಲಾಗುತ್ತಿರುವ ಪ್ರಮುಖ ಆಹಾರ ಪದಾರ್ಥಗಳಲ್ಲಿ ಅಕ್ಕಿಯೂ ಸೇರಿದೆ. ಕರ್ನಾಟಕ ಅಧಿಕ ಭತ್ತ ಬೆಳೆಯುವ ರಾಜ್ಯಗಳಲ್ಲಿ ಒಂದಾಗಿದ್ದು, ಹೆಚ್ಚಿನ ಪ್ರಮಾಣದಲ್ಲಿ ಅಕ್ಕಿ ಉತ್ಪಾದಿಸುತ್ತಿದೆ. ಹಾಲಿ ರಾಜ್ಯದಲ್ಲಿ ೪೮ ಲಕ್ಷ ೯೧ ಸಾವಿರ ಮೆಟ್ರಿಕ್ ಟನ್ ಅಕ್ಕಿ ಉತ್ಪಾದನಾ ಸಾಮರ್ಥ್ಯವಿದ್ದು ಕೇಂದ್ರದಿಂದ ಬೆಂಬಲ ಬೆಳೆಯೊಂದಿಗೆ ಕೇವಲ ೧ ಲಕ್ಷ ೫ ಸಾವಿರ ಮೆಟ್ರಿಕ್ ಟನ್ ಖರೀದಿಗೆ ಮಾತ್ರ ಅವಕಾಶ ನೀಡಲಾಗಿತ್ತು. ಈ ಹಿನ್ನೆಲೆ ಕೇಂದ್ರ ಸರ್ಕಾರ ಕೂಡಲೇ ಮಧ್ಯ ಪ್ರವೇಶಿಸಿ ೨೦೨೪-೨೫ನೇ ಸಾಲಿನಲ್ಲಿ ಬೆಂಬಲ ಬೆಲೆಯೊಂದಿಗೆ ಕನಿಷ್ಠ ೫ ಲಕ್ಷ ಮೆಟ್ರಿಕ್ ಟನ್ ಅಕ್ಕಿ ಖರೀದಿಗೆ ನಿರ್ದೇಶನ ನೀಡುವಂತೆ ಕೃಷಿ ಸಚಿವರು ಕಳೆದ ಡಿಸೆಂಬರ್‌ನಲ್ಲಿ ಪತ್ರದ ಮುಖೇನ ಮನವಿ ಮಾಡಿದ್ದರು.

ಇದಕ್ಕೆ ಸ್ಪಂದಿಸಿರುವ ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವಾಲಯ ೫ ಲಕ್ಷ ಮೆಟ್ರಿಕ್ ಟನ್ ಅಕ್ಕಿ ಖರೀದಿಗೆ ಸೂಕ್ತ ಕ್ರಮ ವಹಿಸುವಂತೆ ರಾಜ್ಯದ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನ ಇಲಾಖೆ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದೆ.

<><><><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇಂದಿನಿಂದ ಇದೇ ೧೯ರವರೆಗೆ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ ನಡೆಯಲಿದೆ. ಇಂದು ಸಂಜೆ ೫.೩೦ ಕ್ಕೆ ಬಹುರೂಪಿ ನಾಟಕೋತ್ಸವಕ್ಕೆ ಹಿರಿಯ ರಂಗಕರ್ಮಿ ಅತುಲ್ ಕುಲಕರ್ಣಿ ಚಾಲನೆ ನೀಡಲಿದ್ದಾರೆ. ದೇಶದ ೭ ವಿವಿಧ ಭಾಷೆಯ ೨೨ ನಾಟಕಗಳು ಪ್ರದರ್ಶನಗೊಳ್ಳಲಿದ್ದು, ಇದೇ ಮೊದಲ ಬಾರಿಗೆ ಬಹುರೂಪಿಯಲ್ಲಿ ಮಕ್ಕಳ ನಾಟಕೋತ್ಸವ ನಡೆಯಲಿದೆ. ರಂಗಾಯಣದ ಅಂಗಳದಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ, ರಾಷ್ಟ್ರೀಯ ವಿಚಾರ ಸಂಕಿರಣ, ಜನಪದೋತ್ಸವ ನಡೆಯಲಿದ್ದು ಹಾಗೂ ಪುಸ್ತಕ ಮೇಳ ಆಯೋಜಿಸಲಾಗಿದೆ. ಈ ರಾಷ್ಟ್ರೀಯ ನಾಟಕೋತ್ಸವದಲ್ಲಿ ದೇಶಾದ್ಯಂತ ೫೦೦ ಕ್ಕೂ ಹೆಚ್ಚು ಕಲಾವಿದರು ೩೦೦ ಕ್ಕೂ ಹೆಚ್ಚು ಜನಪದ ಕಲಾವಿದರು ಭಾಗಿಯಾಗಲಿದ್ದಾರೆ.

<><><>

ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದ ಪ್ರಕರಣದ ಸೂಕ್ತ ತನಿಖೆಗಾಗಿ ಆಗ್ರಹಿಸಿ ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆ ಕುರಿತು ಪೊಲೀಸರು ಸಮರ್ಪಕ ತನಿಖೆ ನಡೆಸುವ ಅಗತ್ಯವಿದೆ. ಸಂತ್ರಸ್ತ ಮಾಲೀಕ ಕರ್ಣ ಅವರಿಗೆ ಬಿಜೆಪಿ ವತಿಯಿಂದ ೧ ಲಕ್ಷ ರೂಪಾಯಿ ಪರಿಹಾರ ನೀಡಲಾಗಿದೆ ಎಂದು ಹೇಳಿದ್ದಾರೆ. ದನದ ಕೆಚ್ಚಲು ಕೊಯ್ದ ಪ್ರಕರಣಕ್ಕೆ ರಾಜ್ಯದ ಕಾಂಗ್ರೆಸ್ ಸರ್ಕಾರದ ಧೋರಣೆಯೇ ಕಾರಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯ ತಂಡವು ಇಂದು ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಸಂತ್ರಸ್ತ ಮಾಲೀಕನ ಮನೆಗೆ ಭೇಟಿ ನೀಡಿ, ಗೋಪೂಜೆಯನ್ನೂ ನೆರವೇರಿಸಿ ದನದ ಮಾಲೀಕನಿಗೆ ಧೈರ್ಯ ತುಂಬಿದರು. ಗೋಪೂಜೆ ಮಾಡುವ ಈ ನಾಡಿನಲ್ಲಿ, ದೇಶದಲ್ಲಿ ಈ ದುರ್ಘಟನೆ ನಡೆದಿರುವುದು ಖಂಡನೀಯ ಎಂದು ವಿಜಯೇಂದ್ರ ಅಭಿಪ್ರಾಯಪಟ್ಟರು.

<><><>

ದೇಶಾದ್ಯಂತ ಇಂದು ಸಶಸ್ತ್ರ ಪಡೆಗಳ ಮಾಜಿ ಸೈನಿಕರ ದಿನ - ವೆಟರನ್ಸ್ ಡೇ ಅನ್ನು ಆಚರಿಸಲಾಗುತ್ತಿದ್ದು, ಕಮಾಂಡರ್-ಇನ್-ಚೀಫ್ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ ಸಾಧನೆಗಳನ್ನು ಸ್ಮರಿಸಿಕೊಳ್ಳಲಾಗುತ್ತಿದೆ. ಅವರ ಸಾಧನೆ ನಮಗೆ ದಾರಿ ದೀಪ ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ರಾಜ್ಯಾಧ್ಯಕ್ಷ ಡಾ. ಎನ್.ಕೆ. ಶಿವಣ್ಣ ಹೇಳಿದ್ದಾರೆ.

ಆಕಾಶವಾಣಿಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಅವರು ಯುವ ಜನಾಂಗಕ್ಕೆ ಸೇನೆಯ ಮಹತ್ವ ತಿಳಿಸಿಕೊಡುವುದು ಇಂದಿನ ಅಗತ್ಯ ಎಂದರು.

ಧ್ವನಿ : ಡಾ. ಎನ್.ಕೆ. ಶಿವಣ್ಣ

<><><><>

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಸಹೋದರ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ತೆರಳುತ್ತಿದ್ದ ಕಾರು ಅಪಘಾತಕ್ಕೀಡಾಗಿರುವ ಘಟನೆ ಇಂದು ಮುಂಜಾನೆ ೬ ಗಂಟೆಯ ಸುಮಾರಿಗೆ ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲೂಕಿನ ಅಂಬಡಗಟ್ಟಿ ಗ್ರಾಮದ ಬಳಿ ಸಂಭವಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>